ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):—

ಅ) ಹೌದು.

ಆ) ಇದುವರೆಗೂ ರೂ. 149.198 ಲಕ್ಷ ಖರ್ಚಾಗಿರುತ್ತದೆ.

ಇ) ತುಮಕೂರು ಜಿಲ್ಲೆಯಲ್ಲಿ ಕುಣಿಗಲ್ ತಾಲ್ಲೂಕಿನ ಕಗ್ಗೆರೆ ಗ್ರಾಮವನ್ನು ಈ ಯೋಜನೆಯಡಿಯಲ್ಲಿ ಆಯ್ಕೆ ಮಾಡಲಾಗಿದ್ದು ಪ್ರಾಯೋಜಕರ ಸಹಮತಿಯನ್ನು ನಿರೀಕ್ಷಿಸಲಾಗಿದೆ. ಸಹಮತಿ ದೊರಕಿದ ನಂತರ ಮಾರ್ಗ ಸೂಚಿಯನ್ವಯ ಕ್ರಿಯಾ ಯೋಜನೆಯನ್ನು ತಯಾರಿಸಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ

37(151) ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್):— ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳು ಯಾವುವು?

ಶ್ರೀ ಬಿ.ಎ. ಮೊಹಿದ್ದೀನ್ (ಉನ್ನತ ಶಿಕ್ಷಣ ಸಚಿವರು):—

ಅ) 469

ಆ) ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕ್ರಮ ಜರುಗಿಸಲಾಗುತ್ತಿದೆ.

<u>ಮೈಸೂರು ನಗರದ ಕೆ.ಆರ್. ಆಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷ್ಯದಿಂದ ರೋಗಿ ಮೃತಪಟ್ಟ ಬಗ್ಗೆ.</u>

38(405) ಶ್ರೀ ಇ. ಮಾರುತಿರಾವ್ ಪವಾರ್ (ನರಸಿಂಹರಾಜ):— ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.